**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/356/ಗ್ರಾಪಂಅ/2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 13-12-2018

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು..**

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

**ಮಾನ್ಯರೆ,**

**ವಿಷಯ:** 2018-19ನೇ ಸಾಲಿನ ಶಾಸನಬದ್ಧ ಅನುದಾನದ 3ನೇ ತ್ರೈಮಾಸಿಕ ಕಂತಿನ ಸಿಬ್ಬಂದಿ ವೇತನ ಪಾವತಿಸುವ ಕುರಿತು

**ಉಲ್ಲೇಖ:**
1. ಸರ್ಕಾರದ ಪತ್ರ ಸಂಖ್ಯೆ ಗ್ರಾಅಪ 74 ಗ್ರಾಪಂಸಿ 2017, ದಿನಾಂಕ 14.06.2018.
2. ಸರ್ಕಾರದ ಇದೇ ಸಮ ಸಂಖ್ಯೆಯ ಆದೇಶ ದಿನಾಂಕ: 22.11.2018.

----

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(1) ರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದ ಮಾದರಿಯಲ್ಲಿ ದಿನಾಂಕ 31.10.2017 ರಲ್ಲಿದ್ದಂತೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರುಗಳಿಗೆ ಸರ್ಕಾರದ ನಿಧಿಯಿಂದ ವೇತನ ಪಾವತಿಸುವ ಬಗ್ಗೆ ವಿವರವಾಗಿ ತಿಳಿಸಲಾಗಿದ್ದು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಪಂಚತಂತ್ರ ತಂತ್ರಾಂಶದಲ್ಲಿ ಅನುಮೋದನೆ ನೀಡಿರುವವರಿಗೆ ಕಾರ್ಮಿಕ ಇಲಾಖೆಯು ನಿಗಧಿಪಡಿಸಿರುವಂತೆ ವೇತನ ಪಾವತಿಸುವಂತೆ ತಿಳಿಸಲಾಗಿದೆ.

ಉಲ್ಲೇಖ(2) ರಲ್ಲಿ 2018-19ನೇ ಸಾಲಿನ ಶಾಸನಬದ್ಧ ಅನುದಾನದ 3ನೇ ತ್ರೈಮಾಸಿಕ ಕಂತನ್ನು ಸಿಬ್ಬಂದಿ ವೇತನ ಖಾತೆಗೆ ಬಿಡುಗಡೆಗೊಳಿಸುತ್ತಿದ್ದು, ಸದರಿ ಅನುದಾನವನ್ನು ಕಡ್ಡಾಯವಾಗಿ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಪಂಚತಂತ್ರ ತಂತ್ರಾಂಶದಲ್ಲಿ ಅನುಮೋದನೆ ನೀಡಿರುವ ಗ್ರಾಮ ಪಂಚಾಯತಿ ನೌಕರರುಗಳಿಗೆ ಮಾತ್ರ ವೇತನ ಪಾವತಿಸುವುದು ಹಾಗೂ ಅನುಮೋದನೆಯಾಗದಿರುವ ನೌಕರರುಗಳಿಗೆ ಈಗಾಗಲೇ ತಿಳಿಸಿರುವಂತೆ ಗ್ರಾಮ ಪಂಚಾಯತಿಗಳು ತಮ್ಮ ಸ್ವಂತ ಸಂಪನ್ಮೂಲದಲ್ಲಿ ವೇತನ ಪಾವತಿಸಲು ಕ್ರಮ ಕೈಗೊಳ್ಳುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

13/12

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:**

1. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಗಳು
2. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.